# Bangalore
# Regional News
# 05.09.2025 / 6.40 pm

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

೧. ಶಿಲ್ಪ ಸಮಾಗಮ- ೨೦೨೫ಕ್ಕೆ ಬೆಂಗಳೂರಿನಲ್ಲಿ ಕೇಂದ್ರ ಸಚಿವ ವಿರೇಂದ್ರ ಕುಮಾರ್ ಹಾಗೂ ರಾಮ್‌ದಾಸ್ ಅಠಾವಳೆ ಚಾಲನೆ

೨. ಮೊಬೈಲ್ ಬಿಡಿ-ಪುಸ್ತಕ ಹಿಡಿಯುವಂತೆ ಮಕ್ಕಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ

೩. ೨೦೨೫ನೇ ಸಾಲಿನ ರಾಷ್ಟ್ರೀಯ ಶಿಕ್ಷಕರ ಪ್ರಶಸ್ತಿಗೆ ಕರ್ನಾಟಕದ ಮೂವರ ಆಯ್ಕೆ

೪. ಗ್ರೇಟರ್ ಬೆಂಗಳೂರಿನ ಪಾಲಿಕೆಗಳ ಆಯುಕ್ತರಿಂದ ಇಂದು ವಿವಿಧೆಡೆ ಪರಿಶೀಲನೆ - ತ್ಯಾಜ್ಯ ವಿಲೇವಾರಿ ಕುರಿತಂತೆ ಪರಾಮರ್ಶೆ

><><><><><><

ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯದಿಂದ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಇಂದಿನಿಂದ “ಶಿಲ್ಪ ಸಮಾಗಮ ಮೇಳ ೨೦೨೫” ಆಯೋಜಿಸಲಾಗಿದೆ. “ಶಿಲ್ಪ ಸಮಾಗಮ ಮೇಳ”ಕ್ಕೆ ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವ ಡಾ. ವೀರೇಂದ್ರ ಕುಮಾರ್ ಹಾಗೂ ರಾಜ್ಯ ಖಾತೆ ಸಚಿವ ರಾಮದಾಸ್ ಅಠಾವಳೆ ಚಾಲನೆ ನೀಡಿದರು. ಬಳಿಕ ಮಾತನಾಡಿದ ಸಚಿವ ಡಾ.ವಿರೇಂದ್ರ ಕುಮಾರ್ ಸ್ವದೇಶಿ ವಸ್ತುಗಳನ್ನು ಖರೀದಿಸುವಂತೆ ಕರೆ ನೀಡಿದರು. ಪರಿಶಿಷ್ಟರು ಹಾಗೂ ದಿವ್ಯಾಂಗರ ಅಭಿವೃದ್ಧಿಗೆ ಈ ಮೇಳ ಸಹಕಾರಿಯಾಗಲಿದೆ ಎಂದು ಹೇಳಿದರು. ಇದೇ ವೇಳೆ ಮಾತನಾಡಿದ ಸಚಿವ ರಾಮ್‌ದಾಸ್ ಅಠಾವಳೆ ಈ ಮೇಳ ೧೦ ದಿನ ನಡೆಯಲ್ಲಿದ್ದು ೮೦ ಸ್ಟಾಲ್ ಗಳಿವೆ. ಬೆಂಗಳೂರಿನ ಜನರು ಈ ಶಿಲ್ಪ ಮೇಳಕ್ಕೆ ಆಗಮಿಸಿ ವಿವಿಧ ರಾಜ್ಯಗಳ ಕರಕುಶಲ ವಸ್ತುಗಳನ್ನು ಖರೀದಿಸುವಂತೆ ಮನವಿ ಮಾಡಿದ್ದಾರೆ. ಸೆಪ್ಟೆಂಬರ್ ೧೪ರ ವರೆಗೆ ೧೦ ದಿನಗಳ ಕಾಲ, ಮೇಳ, ನಡೆಯಲಿದ್ದು, ಸಾರ್ವಜನಿಕರಿಗೆ ಮುಕ್ತ ಪ್ರವೇಶವಿರಲಿದೆ. “ಶಿಲ್ಪ ಸಮಾಗಮ ಮೇಳ”ದಲ್ಲಿ ದೇಶದ ವಿವಿಧ ರಾಜ್ಯಗಳ ನೂರಕ್ಕೂ ಅಧಿಕ ಪರಿಶಿಷ್ಟ ಜಾತಿ, ಹಿಂದುಳಿದ ವರ್ಗ, ಸ್ವಚ್ಛತಾ ಮಿತ್ರರು, ಅಲೆಮಾರಿ ವನವಾಸಿ ಸಮುದಾಯದ ಕುಶಲಕರ್ಮಿಗಳಿಂದ ತಯಾರಾದ ಗೃಹ ಉಪಯೋಗಿ, ಅಲಂಕಾರಿಕ, ಕೈಮಗ್ಗ ಮುಂತಾದ ಸ್ವದೇಶಿ ಉತ್ಪನ್ನಗಳ ಹಾಗೂ ದೇಸಿ ಸೊಗಡಿನ ಖಾದ್ಯಗಳ ಪ್ರದರ್ಶನ ಮಾರಾಟ ನಡೆಯಲಿದೆ. ‘ವೋಕಲ್ ಫಾರ್ ಲೋಕಲ್’ ಸಂಕಲ್ಪದ ಸಾಕಾರ ರೂಪವಾಗಿ ಈ ಮೇಳ ಆಯೋಜನೆಗೊಂಡಿದೆ.

><><><><><><

ಮಕ್ಕಳಲ್ಲಿ ಈಗ ಮೊಬೈಲ್ ಗೀಳು ಹೆಚ್ಚಾಗಿದೆ. ಈ ಗೀಳಿನಿಂದ ಮಕ್ಕಳನ್ನು ಹೊರಗೆ ತರುವ ಕೆಲಸವನ್ನು ಶಿಕ್ಷಕರು ಪರಿಣಾಮಕಾರಿಯಾಗಿ ಮಾಡಬೇಕಾಗಿದೆ. ಈ ನಿಟ್ಟಿನಲ್ಲಿ "ಮೊಬೈಲ್ ಬಿಡಿ-ಪುಸ್ತಕ ಹಿಡಿ" ಎನ್ನುವ ಮೌಲ್ಯವನ್ನು ಪ್ರತೀ ಶಾಲೆ ಮತ್ತು ಮನೆಗಳಲ್ಲೂ ಜಾರಿ ಆಗಬೇಕು ಎಂದು ಶಿಕ್ಷಕರಿಗೆ ಹಾಗೂ ಮಕ್ಕಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ  ಕರೆ ನೀಡಿದರು. ಇಂದು ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ನಡೆದ ರಾಜ್ಯ ಮಟ್ಟದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮದಲ್ಲಿ ರಾಜ್ಯ ಪ್ರಶಸ್ತಿ ಪುರಸ್ಕೃತ ಶಿಕ್ಷಕರಿಗೆ ಪ್ರಶಸ್ತಿ ವಿತರಿಸಿ ಮಾತನಾಡಿದ ಅವರು ನಾನು ರಾಜಪ್ಪ ಮೇಸ್ಟ್ರಿಂದ ಶಾಲಾ ಶಿಕ್ಷಣವನ್ನು ಪಡೆದುಕೊಂಡೆ ಬಳಿಕ ರಾಜಕೀಯವಾಗಿ ನಂಜುಂಡ ಸ್ವಾಮಿ ಅವರಿಂದ  ಪಾಠ ಕಲಿತೆ ಎನ್ನುವ ಮೂಲಕ ತಮ್ಮ ಶಿಕ್ಷಕರನ್ನು ಸ್ಮರಿಸಿದರು.  ನಮ್ಮ ಸಮಾಜದ ಸಮಸ್ಯೆಗಳಿಗೆ ಸ್ಪಂದಿಸುವ ಮನಸ್ಥಿತಿಯನ್ನು ರೂಪಿಸುವುದು ವೈಚಾರಿಕ ಶಿಕ್ಷಣ. ಮಕ್ಕಳಲ್ಲಿ ಅರಿವಿನ ಕಿಡಿ ಹೊತ್ತಿಸುವುದೇ ಶಿಕ್ಷಣದ ಉದ್ದೇಶ ಮತ್ತು ಮಹತ್ವವಾಗಿದೆ. ಇಂಥಾ ಶಿಕ್ಷಣ ನಮ್ಮ ಸರ್ಕಾರದ ಗುರಿ. ಶಿಕ್ಷಣ ನಮ್ಮ ಸರ್ಕಾರದ ಆದ್ಯತಾ ಕಾರ್ಯಕ್ರಮವಾಗಿದ್ದು ವರ್ಷಕ್ಕೆ ೬೫ ಸಾವಿರ ಕೋಟಿ ರೂಪಾಯಿಯನ್ನು ಶಿಕ್ಷಣಕ್ಕೆ ಖರ್ಚು ಮಾಡಲಾಗುತ್ತಿದೆ ಎಂದು ತಿಳಿಸಿದರು. ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರ ನಡವಳಿಕೆಗಳು ಮಕ್ಕಳ ಮೇಲೆ ಅಪಾರ ಪ್ರಭಾವ ಬೀರುತ್ತವೆ. ಆದ್ದರಿಂದ ಶಿಕ್ಷಕರು ಅತ್ಯುನ್ನತ ಮಾನವೀಯ ಮತ್ತು ನಾಗರಿಕ ಮೌಲ್ಯಗಳನ್ನು ಪಾಲಿಸಬೇಕು ಎಂದು ಹೇಳಿದರು

><><><><><><

೨೦೨೫ನೇ ಸಾಲಿನ ರಾಷ್ಟ್ರೀಯ ಶಿಕ್ಷಕ ಪ್ರಶಸ್ತಿಗೆ ಕರ್ನಾಟಕದ ಮೂವರು ಆಯ್ಕೆಯಾಗಿದ್ದಾರೆ.  ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ವಿಭಾಗದಲ್ಲಿ ಮೈಸೂರಿನ ಕೆ.ಎಸ್.ಮಧುಸೂದನ್ ಉನ್ನತ ಶಿಕ್ಷಣ ಇಲಾಖೆ ವಿಭಾಗದಲ್ಲಿ ಕಲಬುರ್ಗಿ ಯ ಡಾ.ಶ್ರೀದೇವಿ ದೇವೇಂದ್ರಪ್ಪ ಕಲ್ಯಾಣ್ ಹಾಗೂ ಮಣಿಪಾಲದ ಡಾ.ಶೋಭ ಪ್ರಶಸ್ತಿಗೆ ಭಾಜನರಾಗಿದ್ದಾರೆ.

><><><><><><

ಗ್ರೇಟರ್ ಬೆಂಗಳೂರಿನ ಐದು ನಗರ ಪಾಲಿಕೆಗಳ ಆಯುಕ್ತರು ಇಂದು ವಿವಿಧ ಸ್ಥಳಗಳಿಗೆ ಭೇಟಿ ನೀಡಿ ಸ್ಥಳ ಪರಿಶೀಲನೆ ನಡೆಸಿದರು. ಬೆಂಗಳೂರು ಉತ್ತರ ನಗರ ಪಾಲಿಕೆಯ ಆಯುಕ್ತರಾದ ಪೊಮ್ಮಲ ಸುನೀಲ್ ಕುಮಾರ್ ಯಲಹಂಕ ಸ್ಯಾಟಲೈಟ್ ವಾರ್ಡ್ ನಲ್ಲಿ ಆಟೋ ಟಿಪ್ಪರ್ ಮಸ್ಟರಿಂಗ್ ಕೇಂದ್ರ ಹಾಗೂ ತಿಂಡ್ಲು ವಾರ್ಡ್ ನಲ್ಲಿ ಪೌರಕಾರ್ಮಿಕರ ಮಸ್ಟರಿಂಗ್ ಕೇಂದ್ರಕ್ಕೆ ಭೇಟಿ ನೀಡಿ ಹಾಜರಾತಿ ಪಡೆಯುವ, ತ್ಯಾಜ್ಯ ವಿಲೇವಾರಿ ಮಾಡುವ ಕಾರ್ಯವೈಖರಿಯ ಕುರಿತು ಪರಿಶೀಲನೆ ನಡೆಸಿದರು. ಬೆಂಗಳೂರು ಪಶ್ಚಿಮ ನಗರ ಪಾಲಿಕೆಯ ಆಯುಕ್ತರಾದ ಡಾ: ರಾಜೇಂದ್ರ ಕೆ.ವಿ ಬಸವೇಶ್ವರನಗರ, ಸಿದ್ಧಯ್ಯ ಪುರಾಣಿಕ ರಸ್ತೆ, ೮ನೇ ಬಿ ಮುಖ್ಯರಸ್ತೆ ವರೆಗೆ ಅಧಿಕಾರಿಗಳೊಂದಿಗೆ ವಿವಿಧ ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

><><><><><><

ಇಂದು ಮಾಜಿ ರಾಷ್ಟ್ರಪತಿ ಸರ್ವಪಲ್ಲಿ ರಾಧಾಕೃಷ್ಣನ್ ಅವರ ಹುಟ್ಟುಹಬ್ಬದ ಹಿನ್ನೆಲೆಯಲ್ಲಿ ದೇಶಾದ್ಯಂತ ಶಿಕ್ಷಕರ ದಿನವನ್ನು ಆಚರಿಸಲಾಗುತ್ತಿದೆ. ರಾಜ್ಯಾದ್ಯಂತ ವಿವಿಧ ಜಿಲ್ಲೆಗಳಲ್ಲೂ ಶಿಕ್ಷಕರ ದಿನಾಚರಣೆ ಮಾಡಲಾಯಿತು. ಶಿಕ್ಷಕರ ಸೇವೆ ನಿಸ್ವಾರ್ಥ ಸೇವೆಯಾಗಿದ್ದು, ಶಿಕ್ಷಕರು ಪವಿತ್ರ ಕೆಲಸವನ್ನು ಮಾಡುತ್ತಿದ್ದಾರೆ ಎಲ್ಲರೂ ತಾವು ಓದಿದ ಶಾಲೆಗೆ, ವಿದ್ಯೆ ಕಲಿಸಿದ ಗುರುಗಳಿಗೆ ಧನ್ಯವಾದಗಳನ್ನು ತಿಳಿಸಬೇಕು ಎಂದು ಹಾಸನದಲ್ಲಿ ಶಾಸಕರಾದ ಸ್ವರೂಪ್ ಪ್ರಕಾಶ್ ಅವರು ತಿಳಿಸಿದ್ದಾರೆ. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಇಲಾಖೆಯ ಸಹಯೋಗದಲ್ಲಿಂದು ಹಾಸನಾಂಬ ಕಲಾಕ್ಷೇತ್ರದಲ್ಲಿ ಆಯೋಜಿಸಿದ್ದ ಜಿಲ್ಲಾ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ಪ್ರಧಾನ ಸಮಾರಂಭ ಕಾರ್ಯಕ್ರಮವನ್ನು ಉದ್ಘಾಟಿಸಿ, ಪ್ರಸ್ತುತ ದಿನಗಳಲ್ಲಿ ಸರ್ಕಾರಿ ಶಾಲೆಗಳು ದುಸ್ಥಿತಿಯಲ್ಲಿವೆ ಅವುಗಳ ಜೀರ್ಣೋದ್ಧಾರ ಮಾಡುವ ಕೆಲಸವನ್ನು ಕೈಗೆತ್ತುಕೊಳ್ಳುತ್ತೇನೆ ಎಂದರು. ಇತ್ತೀಚೆಗೆ ರೈತರು ಮಕ್ಕಳನ್ನು ಶಾಲೆಗೆ ಕಳುಹಿಸುವ ಬದಲು ಹೊಲದ ಕೆಲಸ ಮಾಡಿಸಿ ಕೊಳ್ಳುತ್ತಿದ್ದಾರೆ. ಹಾಗೆ ಮಾಡದೇ ಮಕ್ಕಳನ್ನು ಶಾಲೆಗೆ ಕಳುಹಿಸಬೇಕು ಎಂದರು. ಬಲಿಷ್ಠ ಭಾರತದ ಬೆಳವಣಿಗೆಗೆ ಶಿಕ್ಷಣವೇ ಆಧಾರ,ಶಿಕ್ಷಣ ಕ್ಷೇತ್ರದಲ್ಲಿ ತಂದ ಹೊಸ-ಹೊಸ ಆವಿಷ್ಕಾರ, ಅನ್ವೇಷಣೆಗಳಿಂದ ಇಂದು ಭಾರತವನ್ನು ಪ್ರಪಂಚದ ಭೂಪಟದಲ್ಲಿ ಬಲಿಷ್ಠ ರಾಷ್ಟ್ರವನ್ನಾಗಿ ಕಾಣುತ್ತಿದ್ದೇವೆ ಎಂದು ಗೃಹ ಸಚಿವ ಡಾ: ಜಿ. ಪರಮೇಶ್ವರ ಅವರು ಅಭಿಪ್ರಾಯಪಟ್ಟಿದ್ದಾರೆ. ತುಮಕೂರಿನ ಜಿಲ್ಲಾಡಳಿತದಿಂದ ನಡೆದ ಶಿಕ್ಷಕರ ದಿನಾಚರಣೆ ಉದ್ಘಾಟಿಸಿ ಮಾತನಾಡಿದ ಅವರು ಭಾರತವು ಇಂದು ಶೇಕಡಾ ೮೦ರಷ್ಟು ಸಾಕ್ಷರತೆ ಹೊಂದಿದ ರಾಷ್ಟ್ರವಾಗಿದೆ. ಈ ಸಾಕ್ಷರತಾ ಪ್ರಮಾಣವು ವಿವಿಧ ಸಾಮಾಜಿಕ, ಆರ್ಥಿಕ ಮತ್ತು ಸಾಂಸ್ಕೃತಿಕ ಕ್ಷೇತ್ರಗಳಲ್ಲಿ ಭಾರತದ ಪ್ರಗತಿಗೆ ಕಾರಣವಾಗಿದೆ. ಶಿಕ್ಷಣದ ಬುನಾದಿಯೇ ಭಾರತವನ್ನು ಈ ಮಟ್ಟಕ್ಕೆ ತಂದಿದೆ ಎಂದು ತಿಳಿಸಿದರು. ತತ್ವಜ್ಞಾನಿ, ಶ್ರೇಷ್ಠ ಶಿಕ್ಷಕ ಡಾ. ರಾಧಾಕೃಷ್ಣನ್‌ರವರ ಶಿಸ್ತು, ಶ್ರದ್ಧೆ ನಮಗೆಲ್ಲ ಮಾದರಿಯಾಗಿದೆ ಎಂದು ವಿಧಾನ ಪರಿಷತ್ ಶಾಸಕ ಎಸ್ ವಿ ಸಂಕನೂರ ಅವರು ಗದಗನಲ್ಲಿ ಅಭಿಪ್ರಾಯ ಪಟ್ಟರು. ನಗರದ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ಡಾ. ಸರ್ವಪಲ್ಲಿ ರಾಧಾಕೃಷ್ಣನ್‌ರವರ ಜನ್ಮದಿನಾಚರಣೆ ಅಂಗವಾಗಿ ಜಿಲ್ಲಾ ಮಟ್ಟದ ಶಿಕ್ಷಕರ ದಿನಾಚರಣೆ, ಜಿಲ್ಲಾ ಉತ್ತಮ ಶಿಕ್ಷಕ ಪ್ರಶಸ್ತಿ ಪ್ರದಾನ ಹಾಗೂ ನಿವೃತ್ತ ಶಿಕ್ಷಕರಿಗೆ ಸನ್ಮಾನ ಸಮಾರಂಭ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಡಾ. ಸರ್ವಪಲ್ಲಿ ರಾಧಾಕೃಷ್ಣನ್‌ರವರ ಶಿಸ್ತು ಶ್ರದ್ಧೆಯಿಂದ ಕಾರ್ಯ ನಿರ್ವಹಿಸಿ, ಉನ್ನತಮಟ್ಟ ತಲುಪಿದರು. ಅವರಂತೆ ನಾವೆಲ್ಲರೂ ಸಹ ಶ್ರದ್ಧೆ ಪ್ರಾಮಾಣಿಕತೆಯನ್ನು ಜೀವನದಲ್ಲಿ ಅಳವಡಿಸಿಕೊಂಡು ಮುಂದೆ ಸಾಗಬೇಕು ಎಂದರು. ಪ್ರತಿಯೊಬ್ಬ ವ್ಯಕ್ತಿಯೂ ಭವಿಷ್ಯದಲ್ಲಿ ಉನ್ನತ ಸ್ಥಾನ ಪಡೆಯಲು ಹಾಗೂ ಸಮಾಜದಲ್ಲಿ ಉತ್ತಮ ಜೀವನ ಸಾಗಿಸುವಲ್ಲಿ ವ್ಯಕ್ತಿಯ ಭವಿಷ್ಯ ರೂಪಿಸುವಲ್ಲಿ ಶಿಕ್ಷಕರ ಪಾತ್ರ ಅಪಾರವಾದುದು ಎಂದು ಕಾರವಾರ ನಗರಸಭೆ ಅಧ್ಯಕ್ಷ ರವಿರಾಜ ಅಂಕೋಲೆಕರ ಹೇಳಿದರು. ಅವರು ಕಾರವಾರದ ಬಾಡ ಶಿವಾಜಿ ಪ್ರೌಢ ಶಾಲಾ ಸಭಾಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಶಾಲಾ ಶಿಕ್ಷಣ ಇಲಾಖೆ ಸಂಯುಕ್ತ ಆಶ್ರಯದಲ್ಲಿ ನಡೆದ ಶಿಕ್ಷಕರ ದಿನಾಚರಣೆ ಹಾಗೂ ನಿವೃತ್ತ ಶಿಕ್ಷಕರಿಗೆ ಸನ್ಮಾನ ಕಾರ್ಯಕ್ರಮದಲ್ಲಿ ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ ಭಾವ ಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿದರು. ಇಂದು ಮೌಲ್ಯಾಧಾರಿತ ಶಿಕ್ಷಣದ ಅವಶ್ಯಕತೆ ಇದೆ ಎಂದು ಅಬಕಾರಿ ಹಾಗೂ ಬಾಗಲಕೋಟೆ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಹೇಳಿದ್ದಾರೆ. ನವನಗರದ ಕಲಾಭವನದಲ್ಲಿ ಹಮ್ಮಿಕೊಂಡ ಶಿಕ್ಷಕರ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ಕಳೆದ ೧೫-೨೦ ವರ್ಷಗಳಲ್ಲಿ ಮಹತ್ತರ ಬದಲಾವಣೆ ಕಾಣುತ್ತಿದ್ದೇವೆ. ಸರಕಾರಿ ಶಾಲೆ ಹಾಗೂ ಖಾಸಗಿ ಶಾಲೆಗಳ ನಡುವೆ ಆನ್‌ಲೈನ್ ಪಾಠದ ಗುರು ಇಂದಿನ ವೈಜ್ಞಾನಿಕ ಯುಗದಲ್ಲಿ ದೊಡ್ಡ ಗುರುಗಳಾಗಿ ಪರಿಣಮಿಸಿದ್ದಾರೆ. ಗುರು-ಶಿಷ್ಯರ ಸಂಬಂದ ಕಡಿಮೆಯಾಗುತ್ತಿರುವುದು ಕಳವಳಕಾರಿ ಸಂಗತಿ ಎಂದರು.

ಬಹಳಷ್ಟು ವರ್ಷಗಳಿಂದ ನೆನೆಗುದಿಗೆ ಬಿದ್ದಿರುವ ಗುರುಭವನನಕ್ಕೆ ಮುಖ್ಯಮಂತ್ರಿಗಳ ವಿಶೇಷ ಅನುದಾನದಲ್ಲಿ ೨ ಕೋಟಿ ೫೦ ಲಕ್ಷ ರೂಪಾಯಿಗಳ ಅನುದಾನ ನೀಡಲಾಗುವುದು. ೨೦೨೬ ರೊಳಗೆ ಕಟ್ಟಡವನ್ನು ಪೂರ್ಣಗೊಳಿಸಲಾಗುವುದು ಎಂದು ಕೋಲಾರ ಶಾಸಕ ಕೊತ್ತೂರು ಮಂಜುನಾಥ್ ಹೇಳಿದರು. ಕೋಲಾರ ನಗರದ ಟಿ.ಚನ್ನಯ್ಯ ರಂಗಮಂದಿರದಲ್ಲಿ ನಡೆದ ಶಿಕ್ಷಕರ ದಿನಾಚರಣೆಯನ್ನು ಉದ್ದೇಶಿಸಿ ಮಾತನಾಡಿದ ಅವರು ಜಿಲ್ಲೆಯ ಶಿಕ್ಷಕ ಸಂಘಟನೆಗಳಲ್ಲಿನ ಗೊಂದಲ ಮತ್ತು ನಾನಾ ಕಾರಣಗಳಿಗಾಗಿ ಸುಮಾರು ಐದಾರು ಬಾರಿ ಶಂಕುಸ್ಥಾಪನೆ ಮಾಡಲಾಗಿರುವ ಗುರುಭವನ ನಿರ್ಮಾಣಕ್ಕೆ ವಾರದೊಳಗೆ ಅನುದಾನಕ್ಕೆ ಅನುಮೋದನೆ ಪಡೆದು ಕಾಮಗಾರಿ ಪ್ರಾರಂಭಿಸಲಾಗುತ್ತದೆ.

><><><><><><><

ಇವಿಎಂ ಬದಲಿಗೆ ಬ್ಯಾಲೆಟ್ ಪೇಪರ್ ಮೂಲಕ ಚುನಾವಣೆ ಮಾಡಬೇಕೆನ್ನುವುದು ನಮ್ಮ ಉದ್ದೇಶವಾಗಿದ್ದು, ನಮ್ಮ ಅನುಭವದ ಆಧಾರದ ಮೇಲೆ ಈ ತೀರ್ಮಾನ ಮಾಡಿದ್ದೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಅನೇಕ ದೇಶಗಳು ಇವಿಎಂ ಬಳಸಿ ಪುನಃ ಬ್ಯಾಲೆಟ್ ಪೇಪರ್ ಮೂಲಕ ಚುನಾವಣೆ ಮಾಡುತ್ತಿವೆ ಎಂದು ತಿಳಿಸಿದರು.

><><><><><><><

ಜಿಎಸ್‌ಟಿ ದರದಲ್ಲಿ ಪರಿಷ್ಕರಣೆಯು ಜನಜೀವನ ಸುಲಭಗೊಳಿಸುವ ಮತ್ತು ಆತ್ಮನಿರ್ಭರ ಭಾರತವನ್ನು ಬಲಪಡಿಸುವ ಒಂದು ಪರಿವರ್ತನಾತ್ಮಕ ಹೆಜ್ಜೆಯಾಗಿದೆ ಎಂದು ಉತ್ತರಕನ್ನಡ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಹೇಳಿದ್ದಾರೆ.

><><><><><><><